<u>ಅಸಲು ದಾವಾ **141/2022**</u> ಪಿ.ಡಬ್ಲ್ಯೂ.:- **1**

ದಿನಾಂಕಃ **09-12-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ವಾದಿಗಳ ಪರ ವಕೀಲರಿಂದ:-</u>

ನಾನು ಈ ದಾವೆಯಲ್ಲಿ ವಾದಿ ಆಗಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ದಿಃ 11-04-2008 ರ ಕ್ರಯದ ಕರಾರು ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ದಿಃ 02-12-2008 ರ ನೊಂದಣಿ ಅಲ್ಲದ ಒಪ್ಪಿಗೆ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಋಣಭಾರ ರಹಿತ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ಆರ್ ಟಿ ಸಿ ಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-4 ಎಂದು, ಗ್ರಾಮ ಪಕ್ಕಾಬುಕ್ಕದ ನಮೂನೆ-5 ರ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-5 ಎಂದು, ತಹಶೀಲ್ದಾರ್ ರವರಿಗೆ ನೀಡಿದ ಪತ್ರದ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-6 ಎಂದು, ಗ್ರಾಮ ಲೆಕ್ಕಾಧಿಕಾರಿಗಳ ವರದಿ ಮತ್ತು ರಾಜಸ್ವ ನಿರೀಕ್ಷಕರ ವರದಿಯ 2 ದೃಢೀಕೃತ ನಕಲುಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-7 ಮತ್ತು 8 ಎಂದು, ಪ್ರತಿವಾದಿಯ ತಂದೆಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-9 ಎಂದು, ಚೆಕ್ ಪುಸ್ತಕದ ಚೆಕ್ ಲೀಫ್ಸ್ ಗೆ ಸಂಬಂಧಪಟ್ಟಂತೆ ದಾಖಲೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-10 ಎಂದು, ಸ್ಟೇಟ್ ಮೆಂಟ್ ಆಫ್ ಅಕೌಂಟನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-11 ಎಂದು, ಪೊಲೀಸರು ನೀಡಿದ ಸ್ವೀಕೃತಿ ಮತ್ತು ಹಿಂಬರಹವನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.